# ಕರ್ನಾಟಕ ಸರ್ಕಾರದ ನಡವಳಿಗಳು

41

ವಿಷಯ: 2014ರ ಮುಂಗಾರು ಹಂಗಾಮಿನಲ್ಲಿ ಸೋಯಾಅವರೆ ಬಿತ್ತನೆ ಬೀಜಗಳ ಪೂರೈಕೆಗಾಗಿ ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ ಮುಂಗಡ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ದಿನಾಂಕ 14-02-2014ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಕೊಠಡಿಯಲ್ಲಿ 2014ರ ಮುಂಗಾರು ಹಂಗಾಮಿಗೆ ಕರ್ನಾಟಕ ರಾಜ್ಯ ಬೀಜ ನಿಗಮದ ವತಿಯಿಂದ ಇಲಾಖಾ ಕಾರ್ಯಕ್ರಮಗಳಡಿ ರಿಯಾಯಿತಿ ದರದಲ್ಲಿ ರೈತರಿಗೆ ಸೋಯಾಅವರೆ ಬಿತ್ತನೆ ಬೀಜ ಸರಬರಾಜು ಮಾಡುವ ಬಗ್ಗೆ ನಡೆದ ಸಭೆಯ ನಡವಳಿಗಳು.
2. ಕೃಷಿ ನಿರ್ದೇಶಕರ ಪತ್ರ ಸಂ. SFS-4/ಸೋ.ಅ/ಮುಂ-14/2013-14, ದಿ:05-03-2014.

## ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ದಿ: 14-02-2014 ರ ನಡವಳಿಯಲ್ಲಿ ಮುಂಗಾರು-2013ರ ಹಂಗಾಮಿನಲ್ಲಿ ಸೋಯಾ ಅವರೆ ಬೀಜೋತ್ಪಾದನೆ ಕೈಗೊಂಡಿರುವ ಪ್ರದೇಶಗಳಲ್ಲಿ ವಿಶೇಷವಾಗಿ ಮಧ್ಯಪ್ರದೇಶದಲ್ಲಿ ಬೆಳೆಹಾನಿಯಿಂದ ಬೀಜೋತ್ಪಾದನೆಯು ಕುಂಠಿತಗೊಂಡಿರುವುದರ ಜೊತೆಗೆ ಮಾರುಕಟ್ಟೆ ದರಗಳು ಹೆಚ್ಚಾಗಿರುವುದರಿಂದ ಈ ಬೆಳೆಯ ಕ್ಷೇತ್ರವು ಮುಂಬರುವ ಹಂಗಾಮಿನಲ್ಲಿ ಇನ್ನೂ ಹೆಚ್ಚಿಗೆ ಬರುವ ಸಾಧ್ಯತೆ ಇರುವುದರಿಂದ, ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ 40,000 ಕ್ವಿಂಟಾಲ್‌ಗಳ ಸೋಯಾಅವರೆ ಪ್ರಮಾಣಿತ ಬಿತ್ತನೆ ಬೀಜಗಳನ್ನು ಖರೀದಿಸಿ ಕೃಷಿ ಇಲಾಖೆಯ ಸಹಾಯಧನದ ಕಾರ್ಯಕ್ರಮಗಳಲ್ಲಿ ವಿತರಣೆ ಮಾಡಲು ಹಾಗೂ ಬೀಜೋತ್ಪಾದನೆ ಕೈಗೊಳ್ಳಲು ಬೇಕಾಗುವ ಮುಂಗಡ ಆರ್ಥಿಕ ನೆರವಿಗಾಗಿ ಸೂಕ್ತ ಪ್ರಸ್ತಾವನೆಯನ್ನು ಕೃಷಿ ಇಲಾಖೆಗೆ ಸಲ್ಲಿಸಲು ಸೂಚಿಸಲಾಗಿದೆ. ಹಾಗೂ ಬೀಜ ನಿಗಮವು ಇಲಾಖೆಗೆ ಪೂರೈಸಬಹುದಾದ ಪ್ರಮಾಣಿತ ಬೀಜಗಳನ್ನು ಖರೀದಿಸಲು ಸಹಾಯವಾಗುವಂತೆ, ಇಲಾಖೆಯಲ್ಲಿ 2013-14ನೇ ಸಾಲಿನಲ್ಲಿ ಬಿತ್ತನೆ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ಉಳಿಕೆಯಾಗಿರುವ ರೂ. 5.00 ಕೋಟಿಗಳನ್ನು ಬೀಜ ನಿಗಮಕ್ಕೆ ಮುಂಗಡವಾಗಿ ನೀಡಲು ಕೂಡಲೇ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

ಮೇಲೆ ಓದಲಾದ (2) ರ ಕೃಷಿ ನಿರ್ದೇಶಕರು ಪತ್ರದಲ್ಲಿ ಇಲಾಖೆಯ ಚಾಲ್ತಿ ಯೋಜನೆಯಾದ 'ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ' ಯೋಜನೆ ಲೆಕ್ಕ ಶೀರ್ಷಿಕೆ: 2401-00-103-0-15 ಅಡಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಣೆ ಕಾರ್ಯಕಮ ಅನುಷ್ಠಾನಕ್ಕಾಗಿ 2013-14 ನೇ ಸಾಲಿನಲ್ಲಿ ಇದುವರೆಗೆ ರೂ. 96.86 ಕೋಟಿಗಳು ಬಿಡುಗಡೆಯಾಗಿದ್ದು, ಉಪ ಲೆಕ್ಕ ಶೀರ್ಷಿಕೆ ಸಾಮಾನ್ಯ (059) ರಡಿ ಉಳಿಕೆಯಾಗಬಹುದಾದ ಸುಮಾರು ರೂ. 6.41 ಕೋಟಿಗಳಲ್ಲಿ ರೂ. 5.00 ಕೋಟಿಗಳನ್ನು ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ ಮುಂಗಡವಾಗಿ ಸೋಯಾಅವರೆ ಬಿತ್ತನೆ ಬೀಜ ಖರೀದಿಗೆ ನೀಡಬಹುದಾಗಿರುತ್ತದೆ. ಕರ್ನಾಟಕ ರಾಜ್ಯ ಬೀಜ ನಿಗಮವು 2014ರ ಮುಂಗಾರು ಹಂಗಾಮಿನಲ್ಲಿ ಇಲಾಖಾ ಕಾರ್ಯಕ್ರಮಗಳಡಿ, ರೈತರಿಗೆ ವಿತರಿಸಲಾಗುವ ಸೋಯಾಅವರೆ ಬಿತ್ತನೆ ಬೀಜದ ಪಮಾಣಕ್ಕೆ ನೀಡಬೇಕಾದ ಸರ್ಕಾರಿ ಭಾಗದ ಅನುದಾನದಲ್ಲಿ ಮುಂಗಡವಾಗಿ ಈಗ ನೀಡಿರುವ ಹಣವನ್ನು ಹೊಂದಾಣಿಕೆ ಮಾಡಿಕೊಳ್ಳಲು ಅನುಮತಿ ನೀಡಿ ಹಾಗೂ ಸದರಿ ಸಂಸ್ಥೆಗಳು ಸಲ್ಲಿಸುವ Grant-in-aid ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರ ಕೃಷಿ ನಿರ್ದೇಶಕರಿಗೆ ನೀಡಿ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

..2..

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂ. ಕೃಇ/30/ಕೃಉಇ/2014 ಬೆಂಗಳೂರು**

**ದಿನಾಂಕ 27-03-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2013-14ನೇ ಸಾಲಿನಲ್ಲಿ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಲೆಕ್ಕ ಶೀರ್ಷಿಕೆ:2401-00-103-0-15 ರಡಿ ಈಗಾಗಲೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ಉಳಿತಾಯವಾಗುವ ಅನುದಾನದಲ್ಲಿ ರೂ.5.00 ಕೋಟಿಗಳನ್ನು (ರೂಪಾಯಿ ಐದು ಕೋಟಿಗಳು ಮಾತ್ರ) ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಸಂಸ್ಥೆಗೆ ಭರಿಸಲು ಅನುಮತಿ ನೀಡಿದೆ.

ಕರ್ನಾಟಕ ರಾಜ್ಯ ಬೀಜ ನಿಗಮವು 2014ರ ಮುಂಗಾರು ಹಂಗಾಮಿನಲ್ಲಿ ಇಲಾಖಾ ಕಾರ್ಯಕ್ರಮಗಳಡಿ, ರೈತರಿಗೆ ವಿತರಿಸಲಾಗುವ ಸೋಯಾಅವರೆ ಬಿತ್ತನೆ ಬೀಜದ ಪ್ರಮಾಣಕ್ಕೆ ನೀಡಬೇಕಾದ ಸರ್ಕಾರಿ ಭಾಗದ ಅನುದಾನದಲ್ಲಿ ಮುಂಗಡವಾಗಿ ಈಗ ನೀಡಿರುವ ಹಣವನ್ನು ಹೊಂದಾಣಿಕೆ ಮಾಡಿಕೊಳ್ಳಲು ಅನುಮತಿ ನೀಡಿದೆ ಹಾಗೂ ಅದರಂತೆ ಕ್ರಮವಹಿಸಲು ಆದೇಶಿಸಿದೆ.

ಈ ಸಂಬಂಧ ಸದರಿ ಸಂಸ್ಥೆಯು ಸಲ್ಲಿಸುವ ಬಿಲ್ಲುಗಳಿಗೆ ಮೇಲು ಸಹಿ ಮಾಡಲು ಕೃಷಿ ನಿರ್ದೇಶಕರವರಿಗೆ ಅಧಿಕಾರ ನೀಡಲಾಗಿದೆ.

ಮೇಲ್ಕಂಡ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ. ಸಂಖ್ಯೆ:ಎಫ್‌ಡಿ/01/ಟಿಎಫ್‌ಪಿ/2013, ದಿನಾಂಕ:10-05-2013ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ್ ಪಾಟೀಲ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ(ಯೋಜನೆ).

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ -1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ. ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು
8. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ, ಹೆಬ್ಬಾಳ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ರಾಷ್ಟ್ರೀಯ ಬೀಜ ನಿಗಮ, ಹೆಬ್ಬಾಳ, ಬೆಂಗಳೂರು.
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ, ಬೆಂಗಳೂರು.
13. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು.
14. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.